ಗೌರಿಬಿದನೂರು ತಾಲ್ಲೂಕಿನಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಶಾಲೆ ಪ್ರಾರಂಭ

57(252) ಶ್ರೀ ಶಿವಶಂಕರ ರೆಡ್ಡಿ ಎನ್. ಎಚ್. (ಗೌರಿಬಿದನೂರು): ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಕಿತ್ತೂರು ರಾಣಿ ಚನ್ನಮ್ಮ ಶಾಲೆಯನ್ನು ಪ್ರಾರಂಭಿಸಲು ಈಗಾಗಲೇ ಅರ್ಧ ಎಕರೆ ಜಮೀನನ್ನು ಮಂಜೂರು ಮಾಡಿದ್ದು, ಇದುವರೆವಿಗೂ ಕಟ್ಟಡ ಸ್ಥಾಪನೆಯಾಗಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದರೆ ಕಟ್ಟಡ ಸ್ಥಾಪಿಸಲು ಅನುದಾನ ಮಂಜೂರು ಮಾಡಿ ಈ ವಿಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೂಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎ. ನಾರಾಯಣಸ್ವಾಮಿ (ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು):

ಅ) ಮತ್ತು ಆ) ಹೌದು. ಗೌರಿಬಿದನೂರು ತಾಲ್ಲೂಕಿನ ನಗರಗೆರೆ ಹೋಬಳಿ ಮಣಿವಾಲ ಗ್ರಾಮದಲ್ಲಿ ಸರ್ವೇ ಸಂಖ್ಯೆ 29ರಲ್ಲಿ 10.00 ಎಕರೆ ಜಮೀನನ್ನು ಕಿತ್ತೂರು ರಾಣಿ ಚನ್ನಮ್ಮ ಬಾಲಕಿಯರ ವಸತಿ ಶಾಲೆಯ ಕಟ್ಟಡ ನಿರ್ಮಾಣಕ್ಕೆ ಮಂಜೂರಾತಿ ಪಡೆಯಲು ಕ್ರಮ ಜರುಗಿಸಲಾಗುತ್ತಿದೆ. ಜಮೀನು ಮಂಜೂರಾದ ತಕ್ಷಣ ಶಾಲಾ ಕಟ್ಟಡ ಸಂಕೀರ್ಣ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಡ್ಯಾಂನ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವುದು

58(258) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ.

ಅ) ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಡ್ಯಾಂನ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 50 ಹಾಸಿಗೆಯಿಂದ 100 ಹಾಸಿಗೆಗೆ ಮೇಲ್ದರ್ಜೆ ಗೇರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;